**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ಶೈ.ಶಾ./ಕೇ.ಮಾ.ಸಂ.ಅ.ಸ.ವಿ.ವೇ.2022/2022-23

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ:- 05/12/2022

**ಪತ್ರಿಕಾ ಪ್ರಕಟಣೆ**

ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವಾಲಯ, ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರು, 2022-23ನೇ ಸಾಲಿನ CSSS ಯೋಜನೆಯ ವಿವಿಧ ನವೀಕರಣಗಳು ಹಾಗೂ Fresh Batchಗಳ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು ಈಗಾಗಲೇ ನಿಗಧಿಪಡಿಸಿದ್ದ ದಿನಾಂಕವನ್ನು ವಿಸ್ತರಿಸಿ, ದಿನಾಂಕ:-31-12-2022ರ ವರೆವಿಗೂ ಕಾಲಾವಕಾಶವನ್ನು ನೀಡಿರುತ್ತಾರೆ. ಆದಕಾರಣ, ಅರ್ಹ ವಿದ್ಯಾರ್ಥಿಗಳು (**Link for submission of application website:www.scholarship.gov.in =» New User(Register)** ಈ portalನಲ್ಲಿಯೇ **2022ರ Fresh Batchನ ಹಾಗೂ ವಿವಿಧ ನವೀಕರಣಗಳಿಗೆ ವಿದ್ಯಾರ್ಥಿಗಳು ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ.** ಆಸಕ್ತ ಅರ್ಹ ವಿದ್ಯಾರ್ಥಿಗಳು ಸದರಿ ಪೋರ್ಟಲ್‌ನಲ್ಲಿ ಲಭ್ಯವಿರುವ **Guidelines**ನ್ನು ಖಡ್ಡಾಯವಾಗಿ ಓದಿ ಅರ್ಥೈಸಿಕೊಂಡು ಕೊಡಲೇ ಕೇಂದ್ರ ಸರ್ಕಾರದ ವತಿಯಿಂದ ವಿಸ್ತರಿಸಿರುವ ದಿನಾಂಕ:-**31-12-2022ರೊಳಗಾಗಿ** **"Online"** ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

**ಹಾಗೂ 2022ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ** (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಛಿಸುವ ಅರ್ಹ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ಅರ್ಹ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ. ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ: 15/01/2023ರೊಳಗೆ** ಪರಿಶೀಲಿಸಲು ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: http://pue.karnataka.gov.in =» Services & Schemes =» Administration =» Scholarship** ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:-

1. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸುವ ಸಲುವಾಗಿ.